ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: 4 ಮೀಸಲಾತಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE 29-10-20

# ಬೆಳಗಾವಿ ಸುವರ್ಣಸೌಧ ಬಳಿ ಪಂಚಮಸಾಲಿಗಳ ಕಹಳೆ

# 2ಎ ಮೀಸಲು: ನ.28 ಗಡುವು

## 1 ತಿಂಗಳಲ್ಲಿ ಸರ್ಕಾರ ಬೇಡಿಕೆ ಈಡೇರಿಸದಿದ್ದರೆ ಡಿ.23ರಿಂದ ಬೆಂಗಳೂರಿಗೆ ಪಾದಯಾತ್ರೆ

## ಮೀಸಲಾತಿಗೆ ಆಗ್ರಹಿಸಿ ಜಯಮೃತ್ಯುಂಜಯ ಸ್ವಾಮೀಜಿಗಳಿಂದ 7 ತಾಸು ಉಪವಾಸ

• **ಕನ್ನಡಪ್ರಭ ವಾರ್ತೆ** ಬೆಳಗಾವಿ

ಲಿಂಗಾಯತ ಪಂಚಮಸಾಲಿ ಸಮುದಾಯಕ್ಕೆ ರಾಜ್ಯ ಸರ್ಕಾರ 2ಎ ಮೀಸಲಾತಿ ನೀಡಬೇಕು, ಕೇಂದ್ರ ಸರ್ಕಾರವು ಸಮುದಾಯವನ್ನು ಒಬಿಸಿ ಪಟ್ಟಿಗೆ ಸೇರಿಸಬೇಕೆಂಬ ಕೂಗು ಇದೀಗ ಮತ್ತಷ್ಟು ತೀವ್ರಗೊಂಡಿದೆ. ಈ ಸಂಬಂಧ ಬುಧವಾರ ಬೆಳಗಾವಿಯ ಸುವರ್ಣ ವಿಧಾನಸೌಧದ ಎದುರು ಬೆಳಗ್ಗೆ 10ರಿಂದ ಸಂಜೆ 5ರವರೆಗೆ 7 ಗಂಟೆ ಕಾಲ ನಿರಶನ ನಡೆಸಿದ ಕೂಡಲಸಂಗಮ ಲಿಂಗಾಯತ ಪಂಚಮಸಾಲಿ ಪೀಠದ ಬಸವಜಯ ಮೃತ್ಯುಂಜಯ ಸ್ವಾಮೀಜಿ ತಮ್ಮ ಬೇಡಿಕೆ ಈಡೇರಿಕೆಗೆ ನ.28ರ ಗಡುವನ್ನೂ ವಿಧಿಸಿದ್ದಾರೆ. ಈ ಗಡುವಿನೊಳಗೆ ಬೇಡಿಕೆ ಈಡೇರದಿದ್ದರೆ ಡಿ.23ರಿಂದ ಕೂಡಲ ಸಂಗಮದಿಂದ ಬೆಂಗಳೂರಿಗೆ ಪಾದಯಾತ್ರೆ ನಡೆಸುವ ಎಚ್ಚರಿಕೆಯನ್ನೂ ರವಾನಿಸಿದ್ದಾರೆ.

ಮೊದಲೇ ಘೋಷಿಸಿದ್ದಂತೆ ಶ್ರೀಗಳು ಬೆಳಗಾವಿ ನಗರದಲ್ಲಿರುವ ಕಿತ್ತೂರು ರಾಣಿ ಚನ್ನಮ್ಮ, ಡಾ.ಬಿ.ಆರ್.ಅಂಬೇಡ್ಕರ್, ಸಂಗೊಳ್ಳಿ ರಾಯಣ್ಣ ಹಾಗೂ ಹಿರೇಬಾಗೇವಾಡಿಯಲ್ಲಿರುವ ಬಸವೇಶ್ವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಸುವರ್ಣ ವಿಧಾನ ಸೌಧದ ಎದುರು ನಿರ್ಮಿಸಲಾಗಿದ್ದ ಸಾಮಾಜಿಕ ನ್ಯಾಯದ ಹರಿಕಾರ ಸರ್ ಸಿದ್ದಪ್ಪ ಕಂಬಳಿಯವರ ಮಹಾ ವೇದಿಕೆಗೆ ಆಗಮಿಸಿ ಬೆಳಗ್ಗೆ 10ಕ್ಕೆ ನಿರಶನಕ್ಕೆ ಕುಳಿತರು.

ಪ್ರತಿಭಟನೆಯ ವಿಷಯ ಅರಿತ ಜಲಸಂಪನ್ಮೂಲ ಸಚಿವ ರಮೇಶ ಜಾರಕಿಹೊಳಿ ಅವರು ಸರ್ಕಾರದ ಪ್ರತಿನಿಧಿಯಾಗಿ ಹೋರಾಟದ ವೇದಿಕೆಗೆ ಆಗಮಿಸಿ ಮುಖಂಡರ ಜತೆಗೆ ಕೆಲಕಾಲ ಮಾತುಕತೆ ನಡೆಸಿದರು. ಈ ವೇಳೆ ಮಾತನಾಡಿದ ಅವರು, ಪಂಚಮಸಾಲಿ ಸಮಾಜದ ಬೇಡಿಕೆಗಳಿಗೆ ಸಂಬಂಧಿಸಿ ಬೆಂಗಳೂರಿಗೆ ತೆರಳಿ ಮುಖ್ಯಮಂತ್ರಿ ಭೇಟಿ ಮಾಡಿ ಮನವಿ ಸಲ್ಲಿಸುತ್ತೇನೆ.

ಸದ್ಯ ಚುನಾವಣೆ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಹೆಚ್ಚೇನು ಮಾತನಾಡಲು ಸಾಧ್ಯವಿಲ್ಲ ಎಂದರು. ↘ 11



ಬೆಳಗಾವಿಯಲ್ಲಿ ಬುಧವಾರ ಮೀಸಲಾತಿಗಾಗಿ ನಡೆದ ಹೋರಾಟದ ವೇಳೆ ಸಚಿವ ಲಕ್ಷ್ಮಣ ಸವದಿ ಅವರಿಗೆ ಜಯಮೃತ್ಯುಂಜಯ ಸ್ವಾಮೀಜಿ ಶಾಸಕ ಮುರುಗೇಶ್ ನಿರಾಣಿ, ಲಕ್ಷ್ಮಿ ಹೆಬ್ಬಾಳ್ಕರ್ ಮತ್ತಿತರರು ಮನವಿ ಪತ್ರವನ್ನು ಸಲ್ಲಿಸಿದರು.

### ಹಕ್ಕೊತ್ತಾಯಗಳೇನು?

1. ಪಂಚಮಸಾಲಿ ಸಮಾಜಕ್ಕೆ ಲಿಂಗಾಯತ ಪಂಚಮಸಾಲಿ ಜಾತಿ ಪ್ರಮಾಣ ಪತ್ರ ನೀಡಬೇಕು
2. ಪಂಚಮಸಾಲಿ ಸಮಾಜವನ್ನು ಪ್ರವರ್ಗ 3ಬಿ ಯಿಂದ 2ಎಗೆ ವರ್ಗಾಯಿಸಬೇಕು.
3. ಕೇಂದ್ರದ ಹಿಂದುಳಿದ ವರ್ಗಗಳ ಆಯೋಗದಲ್ಲಿ ಪಂಚಮಸಾಲಿ ಸೇರ್ಪಡೆ ಮಾಡಬೇಕು.
4. ಸುವರ್ಣ ವಿಧಾನಸೌಧ ಮುಂಭಾಗದಲ್ಲಿ ಕಿತ್ತೂರು ರಾಣಿ ಚನ್ನಮ್ಮ- ರಾಯಣ್ಣನ ಪ್ರತಿಮೆ ಪ್ರತಿಷ್ಠಾಪನೆ.
5. ಹುಬ್ಬಳ್ಳಿಯ ವಿಮಾನ ನಿಲ್ದಾಣಕ್ಕೆ ಕ್ರಮವಾಗಿ ಚನ್ನಮ್ಮ ಹಾಗೂ ರಾಯಣ್ಣನ ಹೆಸರು ನಾಮಕರಣ ಮಾಡಬೇಕು.
6. ರೈತರು ಬೆಳೆದ ಬೆಳೆಗೆ ವೈಜ್ಞಾನಿಕ ಬೆಲೆಗಾಗಿ ಡಾ.ಎಂ.ಎಸ್.ಸ್ವಾಮಿನಾಥನ್ ವರದಿ ಜಾರಿಗೆ ತರಬೇಕು.
7. ಇತರೆ ಬಡ ಲಿಂಗಾಯತ ಉಪಜಾತಿಗಳಿಗೆ ಸೂಕ್ತ ಮೀಸಲಾತಿ ಒದಗಿಸಬೇಕು.

### ಬೇಡಿಕೆ ಈಡೇರಿಸುವ ವಿಶ್ವಾಸ ನಮಗಿದೆ: ಜಯಮೃತ್ಯುಂಜಯ ಶ್ರೀ

ಬೆಳಗಾವಿ: ಯಡಿಯೂರಪ್ಪ ಮುಖ್ಯಮಂತ್ರಿಯಾಗಲು ಎಲ್ಲಾ ಜನಾಂಗದ ಆಶೀರ್ವಾದ ಎಷ್ಟಿದೆಯೋ ಅಷ್ಟೇ ಆಶೀರ್ವಾದ ಪಂಚಮಸಾಲಿ ಸಮಾಜದ್ದಿದೆ. ಹೀಗಾಗಿ ನಮ್ಮ ಸಮುದಾಯಕ್ಕೆ ಸಚಿವ ಸ್ಥಾನ ನೀವು ಯಾವಾಗ ಬೇಕಾದರೂ ಕೊಡಿ. ಆದರೆ ಮಂತ್ರಿ ಸ್ಥಾನಕ್ಕಿಂತ ಮೊದಲು ನಮ್ಮ ಸಮುದಾಯಕ್ಕೆ ಮೀಸಲಾತಿ ನೀಡಿ ಎಂದು ಕೂಡಲಸಂಗಮ ಬಸವ ಜಯಮೃತ್ಯುಂಜಯ ಸ್ವಾಮೀಜಿ ಆಗ್ರಹಿಸಿದ್ದಾರೆ. ಪಂಚಮಸಾಲಿ ಮೀಸಲಾತಿಗೆ ಆಗ್ರಹಿಸಿ ಬುಧವಾರ ನಡೆದ ಉಪವಾಸ ಸತ್ಯಾಗ್ರಹದ ವೇದಿಕೆಯಲ್ಲಿ ಮಾತನಾಡಿದ ಅವರು ನಮ್ಮ ಬೇಡಿಕೆಯನ್ನು ತಾವು ಈಡೇರಿಸುತ್ತೀರಿ ಎಂಬ ವಿಶ್ವಾಸ ನಮಗಿದೆ ಎಂದರು.